ವಿಶ್ವವಾಣಿ

**Thursday 10th August 2023, Page No.3**

# Green Bengaluru Symposium at RVCE

ವಿಶ್ವವಾಣಿ

# ನಗರ ಹಸಿರಾಗಿಸುವ ನಿಟ್ಟಿನಲ್ಲಿ ಯೋಜನೆ ರೂಪಿಸಲಾಗುವುದು

## ಹಸಿರು ಬೆಂಗಳೂರಿನ ನೋಡಲ್ ಅಧಿಕಾರಿ ಪ್ರೀತಿ ಗೆಹ್ಲೋಟ್ ಹೇಳಿಕೆ



ವಿಚಾರ ಸಂಕಿರಣದಲ್ಲಿ ಹಸಿರು ಬೆಂಗಳೂರಿನ ನೋಡಲ್ ಅಧಿಕಾರಿ ಪ್ರೀತಿ ಗೆಹ್ಲೋಟ್ ಮಾತನಾಡಿದರು.

**ಬೆಂಗಳೂರು:** ಬೆಂಗಳೂರು ನಗರವನ್ನು ಹಸಿರುಮಯ ನಗರವನ್ನಾಗಿಸುವ ನಿಟ್ಟಿನಲ್ಲಿ ಸರಕಾರದಿಂದ ಉತ್ತಮ ಯೋಜನೆಯನ್ನು ರೂಪಿಸಿ ಮುಂದಿನ ಪೀಳಿಗೆ ಉತ್ತಮ ಪರಿಸರ ನಿರ್ಮಿಸಲು ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಹಸಿರು ಬೆಂಗಳೂರಿನ ನೋಡಲ್ ಅಧಿಕಾರಿ ಪ್ರೀತಿ ಗೆಹ್ಲೋಟ್ ತಿಳಿಸಿದರು.

ಬ್ರ್ಯಾಂಡ್ ಬೆಂಗಳೂರು ಯೋಜನೆಯಲ್ಲಿ ಹಸಿರು/ಪರಿಸರ ಬೆಂಗಳೂರು ವಿಷಯಕ್ಕೆ ಸಂಬಂಧಿಸಿದಂತೆ ಆರ್‌ವಿ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಬುಧವಾರ ನಡೆದ ವಿಚಾರ ಸಂಕಿರಣದಲ್ಲಿ ಮಾತನಾಡಿ, ಬೆಂಗಳೂರನ್ನು ಹಸಿರಾಗಿಸುವ ಉದ್ದೇಶದಿಂದ ಬ್ರ್ಯಾಂಡ್ ಬೆಂಗಳೂರು ಯೋಜನೆಯಲ್ಲಿ ಏಳು ವಿವಿಧ ವಿಷಯಗಳಲ್ಲಿ ಬರುವ ಸಲಹೆಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕಿದೆ. ಅದರಂತೆ ಮುಂದಿನ 25 - 30 ವರ್ಷಗಳಲ್ಲಿ ಸಂಪೂರ್ಣ ಬೆಂಗಳೂರನ್ನು ಹಸಿರುಮಯವಾಗಿಸಬೇಕು. ಈ ಸಂಬಂಧ ನಾಗರಿಕರಿಂದ ಬಂದಂತಹ ಸಲಹೆಗಳನ್ನೆಲ್ಲಾ ಅಧ್ಯಯನ ನಡೆಸಿ ಕ್ರೋಢೀಕರಿಸಿ ಉತ್ತಮ ವರದಿಯನ್ನು ಸರಕಾರಕ್ಕೆ ಸಲ್ಲಿಸಲಾಗುವುದು ಎಂದರು.

ಉಪ ಅರಣ್ಯ ಸಂರಕ್ಷಣಾಧಿಕಾರಿ ಸರೀನಾ ಸಿಕ್ಕಲಿಗಾರ್, ಕೆರೆಗಳ ವಿಭಾಗದ ಮುಖ್ಯ ಅಭಿಯಂತರರಾದ ವಿಜಯ್ ಕುಮಾರ್,ಹರಿದಾಸ್, ಆರ್ ವಿ ತಾಂತ್ರಿಕ ಮಹಾ ವಿದ್ಯಾಲಯದ ಪ್ರಾಂಶುಪಾಲ ಕೆ.ಎನ್ ಸುಬ್ರಮಣ್ಯ, ಪಾಲಿಕೆಯ ಅರಣ್ಯ, ತೋಟಗಾರಿಕೆ ವಿಭಾಗದ ಅಧಿಕಾರಿಗಳು, ಕಾಲೇಜು ವಿದ್ಯಾರ್ಥಿಗಳು ಇದ್ದರು.

### ವಿಚಾರ ಸಂಕಿರಣದಲ್ಲಿ ಬಂದ ವಿವಿಧ ಸಲಹೆಗಳು

- ನಗರದ ಸಾರ್ವಜನಿಕ ಹಾಗೂ ಖಾಸಗಿ ಸ್ಥಳಗಳಲ್ಲಿ ಸಸಿಗಳನ್ನು ನೆಡುವುದು.
- ಕೆರೆಗಳಿಗೆ ಕಲುಷಿತ ನೀರು ಸೇರದಂತೆ ಕ್ರಮವಹಿಸುವುದು.
- ಶೇ. 100 ರಷ್ಟು ತ್ಯಾಜ್ಯ ನೀರು ಶುದ್ಧೀಕರಣ ಹಾಗೂ ಶುದ್ಧೀಕರಣ ಘಟಕಗಳನ್ನು ವಿಕೇಂದ್ರಿಕರಿಸುವುದು.
- ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಬರುವ ಅರಣ್ಯ ಸಂಪತ್ತನ್ನು ಸಂರಕ್ಷಿಸುವುದು.
- ಅಪಾರ್ಟ್‌ಮೆಂಟ್‌ಗಳಿಗೆ ಕಡ್ಡಾಯವಾಗಿ ಎಸ್.ಟಿ.ಪಿ ಗಳ ನಿರ್ಮಾಣ ಮಾಡುವುದು.
- ನಗರದಲ್ಲಿರುವ ಎಲ್ಲಾ ಕೆರೆಗಳ ಪುನಶ್ಚೇತನ ಹಾಗೂ ನಿರ್ವಹಣೆ ಮಾಡುವುದು.
- ಅಂತರ್ಜಲ ಪುನಶ್ಚೇತನ ಮಾಡುವ ಮೂಲಕ ಅಂತರ್ಜಲ ಮಟ್ಟವನ್ನು ಹೆಚ್ಚಿಸಬೇಕು.
- ಪರಿಸರವನ್ನು ಉಳಿಸುವ ಬಗ್ಗೆ ನಾವೆಲ್ಲರೂ ಮಕ್ಕಳಿಗೆ ಮನೆಯಿಂದಲೇ ಪರಿಸರ ಉಳಿಸುವ ಬಗ್ಗೆ ಶಿಕ್ಷಣ ನೀಡಿ ಸಸಿಗಳನ್ನು ಪೋಷಿಸಿ ಬೆಳೆಸುವ ಕುರಿತು ಜಾಗೃತಿ ಮೂಡಿಸಬೇಕು.
- ಬಿಬಿಎಂಪಿ, ಜಲಮಂಡಳಿ, ಬಿಡಿಎ ಇಲಾಖೆಗಳು ಸಮನ್ವಯದಿಂದ ಕೆಲಸ ಮಾಡಿ ಪರಿಸರವನ್ನು ವೃದ್ದಿಸಬೇಕು.
- ಅಭಿವೃದ್ಧಿಯಾಗದಂತಹ ಉದ್ಯಾನವನಗಳಲ್ಲಿ ಸಸಿಗಳನ್ನು ನೆಟ್ಟು ಬೆಳೆಸುವ ಯೋಜನೆ ರೂಪಿಸುವುದು.
- ನಗರದ ರಸ್ತೆ ಬದಿ, ಉದ್ಯಾನ, ಮನೆಗಳ ಬಳಿ ಇಂಗು ಗುಂಡಿಗಳನ್ನು ನಿರ್ಮಿಸಿ ಅಂತರ್ಜಲ ಮಟ್ಟವನ್ನು ಹೆಚ್ಚಿಸುವುದು.